ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/13/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:13-05-2021

## ಸುತ್ತೋಲೆ

ವಿಷಯ: 2020-21ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: (1) ಆರ್ಥಿಕ ಇಲಾಖೆಯ ಟಿಪ್ಪಣಿ/ಕಡತ ಸಂಖ್ಯೆ: ಆಇ/424/ವೆಚ್ಚ-8/2020, ದಿನಾಂಕ:18.01.2021 ಮತ್ತು ದಿನಾಂಕ:06.02.2021.
(2) ಸರ್ಕಾರದ ಪತ್ರ ಸಂಖ್ಯೆ: ಇಡಿ 87 ಡಿಸಿಇ 2021, ದಿನಾಂಕ:23.04.2021.
(3) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:07-05-2021.

* * * * * * *

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿನ 2, 4 & 6 ನೇ ಸೆಮಿಸ್ಟರ್ ಅವಧಿಯ ಪದವಿ ಮತ್ತು ಸ್ನಾತಕೋತ್ತರ ಪದವಿ ತರಗತಿಗಳ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಉಲ್ಲೇಖ-(3) ರ ಸುತ್ತೋಲೆಯಲ್ಲಿ ಈಗಾಗಲೇ ಅನುಮತಿ ನೀಡಲಾಗಿದೆ.

ಮುಂದುವರೆದು, ಪ್ರಾಂಶುಪಾಲರು ತಮ್ಮ ಕಾಲೇಜುಗಳಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರಿಗೆ ಮಾಹಿತಿ ನೀಡಿ, ಅರ್ಜಿಗಳನ್ನು ಖುದ್ದಾಗಿ ಅಥವಾ ಇ-ಮೇಲ್ ಮುಖಾಂತರ ಪಡೆದು, ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ಆಯ್ಕೆ ಪ್ರಕ್ರಿಯೆಯನ್ನು ಒಂದು ವಾರದೊಳಗಾಗಿ ಪೂರ್ಣಗೊಳಿಸಿ, ಆಯ್ಕೆ ಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು ಕೂಡಲೆ ಇಲಾಖೆಯ EIMS ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ ಹಾಗೂ ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಾಪಟ್ಟಿಯನ್ವಯ ಅತಿಥಿ ಉಪನ್ಯಾಸಕರನ್ನೂ ಬಳಸಿಕೊಂಡು ಆನ್‌ಲೈನ್ ತರಗತಿಗಳನ್ನು ನಡೆಸಲು ಕೂಡಲೇ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ, ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

ಪ್ರತಿಯನ್ನು, ಮಾಹಿತಿಗಾಗಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಹೆಚ್ಚುವರಿ ನಿರ್ದೇಶಕರು, ಜಂಟಿ ನಿರ್ದೇಶಕರು(ಶೈಕ್ಷಣಿಕ) ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಮ್ಯಾನೇಜರ್/ಅಧೀಕ್ಷಕರು, ವರ್ಗಾವಣೆ & ನಿಯೋಜನೆ ವಿಭಾಗ, ಯೋಜನೆ & ಆಯವ್ಯಯ ವಿಭಾಗ, ಶೈಕ್ಷಣಿಕ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ಕಛೇರಿ ಪ್ರತಿ